# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿ12(6)ಪಿಆರ್/ಇ-14010/21-22

ಮುಖ್ಯ ಆಯುಕ್ತರವರ ಕಛೇರಿ
ಬೃಹತ್ ಮಹಾನಗರ ಪಾಲಿಕೆ ಕಛೇರಿಗಳು,
ಬೆಂಗಳೂರು, ದಿನಾಂಕ:06/12/2021

## ಕಛೇರಿ ಆದೇಶ

ವಿಷಯ: ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರನ್ನು ಪಾಲಿಕೆಯಲ್ಲಿ ಮುಂದುವರೆಸುವ ಬಗ್ಗೆ.

ಉಲ್ಲೇಖ: 1) ಸರ್ಕಾರದ ನಗರಾಭಿವೃದ್ಧಿ ಇಲಾಖೆಯ ಸಂಖ್ಯೆ: ನಅಇ 331 ಎಂಎನ್‌ಯು 2021, ದಿನಾಂಕ:11-11-2021
2) ಸಂಖ್ಯೆ: ಸಂಖ್ಯೆ: ಬಿ12(6)ಪಿಆರ್/ಇ-14010/21-22 ದಿನಾಂಕ:18-09-2021
3) ಶ್ರೀ ಅಶೋಕ್ ಪಾಟೀಲ್, ಸ.ಕಾ.ನಿ.ಅ ರವರ ಮನವಿ ದಿ: 11-11-2021

-------

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖ-(1)ರ ಸರ್ಕಾರದ ನಗರಾಭಿವೃದ್ಧಿ ಇಲಾಖೆಯ ಆದೇಶದಲ್ಲಿ ಶ್ರೀ ಅಶೋಕ್ ಪಾಟೀಲ್, ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಜಂಟಿ ನಿರ್ದೇಶಕರು (ನಗರಯೋಜನೆ-ಉತ್ತರ) ಕಛೇರಿಯಲ್ಲಿ ಸಹಾಯಕ ನಿರ್ದೇಶಕರು (ನಗರಯೋಜನೆ) ಹುದ್ದೆಯಲ್ಲಿ ಕಾರ್ಯನಿರ್ವಹಿಸುತ್ತಿದ್ದ ಇವರನ್ನು ಉಲ್ಲೇಖ-(2)ರ ಆದೇಶದಂತೆ ದಿನಾಂಕ: 18-09-2021ರಂದು ಮಾತೃ ಇಲಾಖೆಗೆ ಹಿಂದಿರುಗಿಸಿರುವ ಆದೇಶವನ್ನು ರದ್ದುಪಡಿಸಿ, ಸದರಿ ಅಭಿಯಂತರರನ್ನು ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ (ನಗರಯೋಜನೆ-ಉತ್ತರ ಕೇಂದ್ರ ಕಛೇರಿ) ಸ್ಥಳದಲ್ಲಿಯೇ 1 ವರ್ಷ 9 ತಿಂಗಳ ಅವಧಿಗೆ (ನಿವೃತ್ತಿಯವರೆಗೆ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಮುಂದುವರೆಸಿ ಆದೇಶಿಸಿದ್ದು, ಈ ಸಂಬಂಧ ಸದರಿ ಅಭಿಯಂತರರು ಉಲ್ಲೇಖ-(3)ರಂತೆ ಪಾಲಿಕೆಯಲ್ಲಿ ಸಲ್ಲಿಸಿರುವ ಮನವಿಯನ್ನು ಪರಿಗಣಿಸಿ, ಸದರಿಯವರನ್ನು ಸರ್ಕಾರದ ಆದೇಶದಂತೆ ಪಾಲಿಕೆಯ ಜಂಟಿ ನಿರ್ದೇಶಕರು (ನಗರಯೋಜನೆ-ಉತ್ತರ) ಕಛೇರಿಯಲ್ಲಿ ಸಹಾಯಕ ನಿರ್ದೇಶಕರು (ನಗರಯೋಜನೆ) ಹುದ್ದೆಯಲ್ಲಿಯೇ ಕಾರ್ಯನಿರ್ವಹಿಸಲು ಮುಂದುವರೆಸಿ ನೇಮಿಸಿ ಆದೇಶಿಸಿದೆ.

ಮೇಲ್ಕಂಡ ಆದೇಶದಂತೆ ಸದರಿ ಅಭಿಯಂತರರು ಮುಂದುವರೆಸಿ, ನೇಮಿಸಿರುವ ಸ್ಥಳದಲ್ಲಿ ಹಾಜರಾತಿ ಸಲ್ಲಿಸಿ, ಸಿ.ಟಿ.ಸಿ ಪ್ರತಿಯನ್ನು ಈ ಕಛೇರಿಗೆ ಸಲ್ಲಿಸಲು ಸೂಚಿಸಿದೆ.

6/12/21
ಉಪ ಆಯುಕ್ತರು (ಆಡಳಿತ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
06/12/2021 6/12/21

ಮಾನ್ಯ ಮುಖ್ಯ ಆಯುಕ್ತರು ರವರ
ಆದೇಶದ ಮೇರೆಗೆ)

**ಪ್ರತಿಯನ್ನು:-**

: ಮಾನ್ಯ ಆಡಳಿತಗಾರರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಮಾನ್ಯ ಮುಖ್ಯ ಆಯುಕ್ತರು ರವರ ಅವಗಾಹನೆಗೆ ತರಲು ಆಪ್ತ ಕಾರ್ಯಾಲಯಕ್ಕೆ ಕಳುಹಿಸಿದೆ.
: ವಿಶೇಷ ಆಯುಕ್ತರು (ಯೋಜನೆ) ರವರ ಅವಗಾಹನೆಗೆ ತರಲು ಆಪ್ತ ಕಾರ್ಯಾಲಯಕ್ಕೆ ಕಳುಹಿಸಿದೆ.
: ಸರ್ಕಾರದ ಅಧೀನ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ಕರ್ನಾಟಕ ಸರ್ಕಾರ, ವಿಕಾಸ ಸೌಧ, ಬೆಂಗಳೂರು ರವರಿಗೆ ಕಳುಹಿಸಿದೆ.
: ವಿಶೇಷ ಆಯುಕ್ತರು (ಆಡಳಿತ) ರವರ ಅವಗಾಹನೆಗೆ ತರಲು ಆಪ್ತ ಕಾರ್ಯಾಲಯಕ್ಕೆ ಕಳುಹಿಸಿದೆ.
: ಪ್ರಧಾನ ಅಭಿಯಂತರರು ರವರಿಗೆ ಕಳುಹಿಸಿದೆ.
: ಮುಖ್ಯ ನಗರ ಯೋಜಕರು / ಅಪರ ನಿರ್ದೇಶಕರು (ನಗರಯೋಜನೆ) ರವರಿಗೆ ಕಳುಹಿಸಿದೆ.
: ಜಂಟಿ ನಿರ್ದೇಶಕರು (ನಗರಯೋಜನೆ-ದಕ್ಷಿಣ) ರವರಿಗೆ ಕಳುಹಿಸಿದೆ.
: ಮಾಹಿತಿ ತಂತ್ರಜ್ಞಾನ ಸಲಹೆಗಾರರುರವರಿಗೆ ಕಳುಹಿಸಿದೆ.
: ಮು.ಲೆ.ಅ / ಮು.ಲೆ.ಪ ರವರಿಗೆ / ಉಪ ನಿಯಂತ್ರಕರು (ಹಣಕಾಸು-ಕೇಂದ್ರ) ರವರಿಗೆ ಕಳುಹಿಸಿದೆ.
: ಸಂಬಂಧಪಟ್ಟ ಅಭಿಯಂತರರಿಗೆ / ಕಛೇರಿ ಪ್ರತಿ.